## ವ್ಯವಹಾರಿಕ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ

**ಸಿಸಿ ಸಂಃ 1052/2021**

| | | |
|---|---|---|
| ಸಾಕ್ಷಿಯ ಹೆಸರುಃ | ಶಿವಕುಮಾರ | ಫ್ರಾಸಾಃಃ 4 |
| ತಂದೆ ಹೆಸರುಃ | ರಾಮ ಬೋವಿ | ಚಾಸಾಃಃ 9 |
| ವಯಸ್ಸುಃ | 30 ವರ್ಷ | ಪ್ರಮಾಣೀಕರಿಸಿದ ದಿಃ 11.06.2025. |
| ಉದ್ಯೋಗಃ | ವ್ಯವಸಾಯ | |
| ವಾಸಸ್ಥಳಃ | ಸತ್ತಗಾಲ ಬಿ ಕಾವಲು ಗ್ರಾಮ, ಪಿರಿಯಾಪಟ್ಟಣ ತಾಃ | |

ಮುಖ್ಯ ವಿಚಾರಣೆಃ ಸಸಅ ರಿಂದಃ

1. ಸಾಕ್ಷಿಯು ಅಮಾನತು ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುಸಿರುತ್ತಾರೆ. ಮಹಜರನ್ನು ನಿಪಿ - 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ - 5(ಎ) ಎಂದು ಗುರುತಿಲಾಯಿತು. ನಿಪಿ - 5 ಕ್ಕೆ ನಾನು ಈಗ್ಗೆ 2-3 ವರ್ಷದ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಯಾವುದೇ ವಾಹನವನ್ನು ಅಮಾನತುಪಡಿಸಿಕೊಂಡಿರುವುದಿಲ್ಲ. ನಿಪಿ - 5 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ.

**(**ಈ ಸಮಯದಲ್ಲಿ ಸಹಾಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.**)**

ಪಾಟೀ ಸವಾಲುಃ ಸಸಅ ರವರಿಂದಃ

1. ದಿಃ 27.08.2019 ರಂದು ಚಾಸಾ- 30 ರವರು ನನ್ನನ್ನು ಮತ್ತು ಚಾಸಾ - 10 ರವರನ್ನು ಪಿರಿಯಾಪಟ್ಟಣ ಪೊಲೀಸ್ ಠಾಣೆಗೆ ಬರಮಾಡಿಕೊಂಡು ಈ ಪ್ರಕರಣದ ವಿದ್ಯಮಾನಗಳನ್ನು ತಿಳಿಸಿ ಪಂಚರಾಗಲು ಕೋರಿಕೊಂಡರು ಎಂದರೆ ಸರಿಯಲ್ಲ. ನಾವು ಒಪ್ಪಿಕೊಂಡ ಮೇರೆಗೆ ಚಾಸಾ - 24 ರವರು ಠಾಣಾ ಆವರಣದಲ್ಲಿ ಇದ್ದ ಕೆಎ.12.ಕ್ಯೂ.8551 ರ ಡಿಸ್ಕವರಿ ಬೈಕನ್ನು ಅಮಾನತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸ್ಥಳದಲ್ಲಿ ನಿಪಿ - 5 ರ ಮಹಜರನ್ನು ಮಧ್ಯಾಹ್ನ 12-00 ರಿಂದ 12-30 ಗಂಟೆಯವರೆಗೆ ಮಾಡಿ, ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.
2. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ

ಇಲ್ಲ ಎಂದು ನುಡಿಯುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದಂತೆ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಒ

ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.
ಪಿರಿಯಾಪಟ್ಟಣ